**2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಡಾಧಿಕಾರಿಗಳ ನ್ಯಾಯಾಲಯ, ಹೆಚ್ ಡಿ ಕೋಟೆ**

**ಸಿ.ಸಿ ನಂ. 263/2018**

**ಸಿ.ಡಬ್ಲ್ಯೂ- 4　　　　ಪಿ.ಡಬ್ಲ್ಯೂ- 4**

ಸಾಕ್ಷಿದಾರರ ಹೆಸರು : ನಾಗೇಗೌಡ

ತಂದೆಯ ಹೆಸರು : ಅಪ್ಪಾಜಿಗೌಡ

ವಯಸ್ಸು : 65 ವರ್ಷ

ಉದ್ಯೋಗ : ವ್ಯವಸಾಯ

ವಾಸ ಸ್ಥಳ : ಹಿರೇಹಳ್ಳಿ ಬಿ ಕಾಲೋನಿ

**ದಿನಾಂಕ 25.10.2024 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ:- ಸ.ಸ. ಅ ರವರಿಂದಃ**

ಸಾಕ್ಷಿಗೆ ನಿಪಿ-1 ರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ ಮೇರೆಗೆ ಸಾಕ್ಷಿಯ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 2017 ರಲ್ಲಿ ಕೊತ್ನಳ್ಳಿ ಗ್ರಾಮದ ನಾಗರಾಜುರವರ ಜಮೀನಿನ ಬಳಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾರು ಸಹಿಮಾಡಿರುತ್ತಾರೆ ಎಂದು ಗೊತ್ತಿಲ್ಲ. ನಿಪಿ-1 ನ್ನು ಬೆಳಿಗ್ಗೆ 11.00 ರಿಂದ 12.00 ರವರೆಗೆ ಜರುಗಿಸಿರುತ್ತಾರೆ. ನನ್ನ ಸಮಕ್ಷಮ ಎರಡು ಮಚ್ಚು ಮತ್ತು ಒಂದು ದೊಣ್ಣೆಯನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ಮುದ್ದೆ ಮಾಲುಗಳನ್ನು ನೋಡಿ ಗುರುತಿಸುತ್ತೀರಾ ಎಂದರೆ ಇದೇ ಎಂದು ಹೇಳಲಾಗುವುದಿಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ**

ನಿಪಿ-1 ರಲ್ಲಿರುವ ವಿಚಾರ ನನಗೆ ಗೊತ್ತಿಲ್ಲ. ಪಂಚನಾಮೆಗೆ ಹಾಜರಾಗಲು ನೋಟೀಸ್ ಕೊಟ್ಟಿರುವುದಿಲ್ಲ. ಸದರಿ ಸ್ಥಳದಲ್ಲಿ ನಮ್ಮ ಊರಿನವರಿದ್ದು ಅವರಹೆಸರು ಗೊತಿಲ್ಲ. ನನ್ನ ಸಮಕ್ಷಮ

ಯಾರು ಸಹಿ ಮಾಡಿರುತ್ತಾರೆ ಎಂದು ಗೊತ್ತಿಲ್ಲ. ಸಾಮಾನ್ಯವಾಗಿ ಮುದ್ದೆ ಮಾಲು 1 ರಿಂದ 3 ವಸ್ತುಗಳನ್ನು ಎಲ್ಲರ ಮನೆಯಲ್ಲೂ ಬಳಕೆ ಮಾಡುತ್ತಾರೆ ಎಂದರೆ ಸರಿ . ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಪಂಚನಾಮೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದು, ಸ್ಥಳದಲ್ಲಿ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲುಗಳ ಮೇಲೆ ನನ್ನ ಸಹಿ ಪಡೆದಿಲ್ಲ. ಈ ವಿಚಾರವಾಗಿ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾ. ದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

**2 ನೇ ಹೆಚ್ಚುವರಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ. ದಂಡಾಧಿಕಾರಿಗಳು, ಹೆಚ್.ಡಿ. ಕೋಟೆ.**